## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹಿಂದುಳಿದ ವರ್ಗಗಳ ಅಲೆಮಾರಿ/ಅರೆಅಲೆಮಾರಿ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಕಲ್ಪಿಸುವ ಕಾರ್ಯಕ್ರಮವನ್ನು ರದ್ದುಗೊಳಿಸುವ ಕುರಿತು.

ಓದಲಾಗಿದೆ.
1. ಸರ್ಕಾರದ ಪರಿಷ್ಕೃತ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 424 ಬಿಎಂಎಸ್ 2013 ದಿನಾಂಕ:17.07.2013.
2. ಪ್ರಸ್ತಾವನೆ ಸಂಖ್ಯೆ: ಹಿಂವಕಇ /ಆಮಾಜ-2/ಸಿಆರ್-02/2019-20 ದಿನಾಂಕ:21.05.2019.

******

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಸರ್ಕಾರದ ಆದೇಶದಲ್ಲಿ ಹಿಂದುಳಿದ ವರ್ಗಗಳ ಅಲೆಮಾರಿ/ಅರೆಅಲೆಮಾರಿ ಜನಾಂಗದ ಪ್ರತಿಭಾವಂತ ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯದ 14 ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಕಲ್ಪಿಸಲು ಮಾರ್ಗಸೂಚಿಗಳೊಂದಿಗೆ ಅನುಮೋದನೆ ನೀಡಲಾಗಿತ್ತು. ಮೇಲೆ ಓದಲಾದ ಕ್ರಮ ಸಂಖ್ಯೆ :(2) ರಲ್ಲಿ ಆಯುಕ್ತರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಏಕಕಡತ ಪದ್ಧತಿಯಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅಲೆಮಾರಿ/ಅರೆಅಲೆಮಾರಿ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾತಿ ಕಲ್ಪಿಸಲಾಗುತ್ತಿದ್ದು, ಇದರಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಆರ್ಥಿಕ ಕೊರತೆ ಉಂಟಾಗುತ್ತಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಮೊರಾರ್ಜಿ ದೇಸಾಯಿ, ಅಟಲ್ ಬಿಹಾರಿ ವಾಜಪೇಯಿ ಮತ್ತು ಇಂದಿರಾಗಾಂದಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆಗಳು ಪ್ರತಿಷ್ಠಿತ ಖಾಸಗಿ ಶಾಲೆಗಳಿಗಿಂತಲೂ ಅಂದರೆ ಶೇಕಡ 92 ಕ್ಕಿಂತಲೂ ಹೆಚ್ಚು ಉತ್ತಮ ಫಲಿತಾಂಶವನ್ನು ಪಡೆಯುತ್ತಿದ್ದು, ಈ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳನ್ನು ಪ್ರತಿಷ್ಠಿತ ಶಾಲೆಗಳ ಬದಲಾಗಿ, ಇಲಾಖಾ ಅಧೀನದಲ್ಲಿ ಬರುವ ವಸತಿ ಶಾಲೆಗಳಲ್ಲಿ ಪ್ರವೇಶ ಕಲ್ಪಿಸುವುದು ಸೂಕ್ತವಾಗಿರುತ್ತದೆ ಹಾಗೂ ಈ ಜನಾಂಗದ ವಿದ್ಯಾರ್ಥಿಗಳು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಏರ್ಪಡಿಸುವ ಸಾಮಾನ್ಯ ಪ್ರವೇಶ ಪರೀಕ್ಷೆ ಪ್ರಕ್ರಿಯೆಯಲ್ಲಿ ಪಾಲ್ಗೊಂಡು, ವಸತಿ ಶಾಲೆಗಳು ಮತ್ತು ಕಾಲೇಜುಗಳಲ್ಲಿ ಆಯ್ಕೆ ಹೊಂದುವುದನ್ನು ಪ್ರೇರೇಪಿಸುವುದು ಸೂಕ್ತವಾಗಿರುತ್ತದೆ. ಅಲ್ಲದೇ ಇಲಾಖೆಯ ಆರ್ಥಿಕ ಮಿತವ್ಯಯ ಸಾಧ್ಯವಾಗುತ್ತದೆ ಎಂದು ವರದಿ ಮಾಡುತ್ತಾ, ಪ್ರತಿಷ್ಠಿತ ಶಾಲೆಗಳಿಗೆ ಅಲೆಮಾರಿ/ಅರೆಅಲೆಮಾರಿ ವಿದ್ಯಾಥಿಗಳನ್ನು ದಾಖಲು ಮಾಡುವ ಯೋಜನೆಯನ್ನು ರದ್ದಗೊಳಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 82 ಬಿಎಂಎಸ್ 2019, ಬೆಂಗಳೂರು**
**ದಿನಾಂಕ:24-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳ ಅಲೆಮಾರಿ/ಅರೆಅಲೆಮಾರಿ ಜನಾಂಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶ ಕಲ್ಪಿಸುವ ಯೋಜನೆಯನ್ನು 2020-2021ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ಸ್ಥಗಿತಗೊಳಿಸಿದೆ. ಈಗಾಗಲೇ ಪ್ರತಿಷ್ಠಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳನ್ನು 10ನೇ ತರಗತಿಯ ವಿದ್ಯಾಭ್ಯಾಸ ಪೂರ್ಣಗೊಳ್ಳುವವರೆಗೆ ಮುಂದುವರೆಸಲು ಸಹ ಸಹಮತಿಸಿದ.

2020-21ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಘದಿಂದ ನಿರ್ವಹಿಸಲ್ಪಡುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ನಿಯಮಾನುಸಾರ ವಿದ್ಯಾರ್ಥಿಗಳನ್ನು ಭರ್ತಿ ಮಾಡಿ, ಉಳಿದ ಖಾಲಿ ಸ್ಥಾನಗಳಿಗೆ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳನ್ನು ಆದ್ಯತೆಯ ಮೇರೆಗೆ ಭರ್ತಿ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಮಾನ್ಯ ಮುಖ್ಯಮಂತ್ರಿಯವರ ಟಿಪ್ಪಣಿ ಸಂಖ್ಯೆ: ಸಿಎಂ/ಎಎಸ್/596 ದಿನಾಂಕ:21.09.2019 ರ ಟಿಪ್ಪಣಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಎಸ್.ಎನ್.ಕಲಾವತಿ)
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1. ಮಹಾಲೇಖಪಾಲರು, (ಎ ಮತ್ತು ಇ) (ಲೆಕ್ಕ ಪರಿಶೋಧನೆ-1) (ಲೆಕ್ಕಪರಿಶೋಧನೆ-2), ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ (ವೆಚ್ಚ) ವಿಧಾನಸೌಧ.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಎಲ್ಲಾ ಜಿಲ್ಲಾಧಿಕಾರಿಗಳು (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ.)
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ.)
6. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಮುಖಾಂತರ.)

<u>ಪ್ರತಿ:-</u>

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

*******